# ಕರ್ನಾಟಕ ಸರ್ಕಾರದ ನಡಾವಳಿಗಳು

**ವಿಷಯ:** **"ಗೃಹ ಜ್ಯೋತಿ"** ಯೋಜನೆಯಡಿ ಗೃಹ ಬಳಕೆ ಸ್ಥಾವರಗಳನ್ನು ಬಿಲ್ ಮಾಡುವ ಕುರಿತು ಸ್ಪಷ್ಟೀಕರಣ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/154/ಪಿಎಸ್ಆರ್/2023, ದಿನಾಂಕ: 20.05.2023.
2. ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್ಆರ್/2023, ದಿನಾಂಕ: 05.06.2023 ಮತ್ತು 15.06.2023.

**ಪ್ರಸ್ತಾವನೆ:**

ಮೂಲಭೂತ ಸೌಕರ್ಯಗಳಲ್ಲಿ ಒಂದಾದ ವಿದ್ಯುಚ್ಛಕ್ತಿಯನ್ನು ಉಚಿತವಾಗಿ ರಾಜ್ಯದ ನಾಗರೀಕರಿಗೆ ಒದಗಿಸಲು ದಿನಾಂಕ: 20.05.2023 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಗೃಹ ಜ್ಯೋತಿ ಯೋಜನೆಯಡಿ ಉಚಿತ ವಿದ್ಯುತ್ ಒದಗಿಸಲು ತಾತ್ವಿಕ ಅನುಮೋದನೆ ನೀಡಿದೆ.

ಸಚಿವ ಸಂಪುಟವು ದಿನಾಂಕ: 02.06.2023 ರಂದು ನಡೆದ ಸಭೆಯಲ್ಲಿ "ಗೃಹ ಜ್ಯೋತಿ" ಯೋಜನೆಯನ್ನು ಕೆಲವು ಷರತ್ತುಗಳೊಂದಿಗೆ ದಿನಾಂಕ: 01.07.2023 ರಿಂದ ಜಾರಿಗೆ ತರುವಂತೆ ಅನುಮೋದಿಸಿದೆ.

"ಗೃಹ ಜ್ಯೋತಿ" ಯೋಜನೆಯಡಿ ರಾಜ್ಯದಲ್ಲಿನ ಪ್ರತಿ ಮನೆಗೆ ಪ್ರತಿ ತಿಂಗಳಿಗೆ ಗರಿಷ್ಠ 200 ಯೂನಿಟ್‌ಗಳವರೆಗಿನ ಬಳಕೆಯ ಮಿತಿಯಲ್ಲಿ ಪ್ರತಿ ಗ್ರಾಹಕರ ಮಾಸಿಕ ಸರಾಸರಿ ಬಳಕೆಯ (ಆರ್ಥಿಕ ವರ್ಷ 2022-23ರ ಬಳಕೆಯ ಆಧಾರದನ್ವಯ) ಯೂನಿಟ್‌ಗಳ ಮೇಲೆ ಶೇ.10 ರಷ್ಟು ಹೆಚ್ಚಿನ ಬಳಕೆಯ ಮಿತಿಯನ್ನು ಅನುಮತಿಸಿ, ಅದಕ್ಕನುಗುಣವಾಗಿ ವಿದ್ಯುತ್ ಬಿಲ್ಲಿನ ಮೊತ್ತವನ್ನು ಉಚಿತವಾಗಿ ಒದಗಿಸಲು; ಹಾಗೂ 200 ಯೂನಿಟ್‌ಗಳ ಬಳಕೆಯನ್ನು ಮೀರಿದ ಗ್ರಾಹಕರು ಪೂರ್ಣ ವಿದ್ಯುತ್ ಬಿಲ್ಲನ್ನು ಪಾವತಿಸಲು ಸರ್ಕಾರವು ಕೆಲವು ಷರತ್ತುಗಳೊಂದಿಗೆ ಸದರಿ ಯೋಜನೆಯನ್ನು ದಿನಾಂಕ: 01.07.2023 ರಿಂದ ಜಾರಿಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್ಆರ್/2023, ದಿನಾಂಕ: 05.06.2023 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿದೆ.

ವಿದ್ಯುತ್ ಸರಬರಾಜು ಕಂಪನಿಗಳು "ಗೃಹ ಜ್ಯೋತಿ" ಯೋಜನೆಯಡಿ ಉಚಿತ ವಿದ್ಯುತ್ ಸೌಕರ್ಯ ಒದಗಿಸುವ ಸಂಬಂದ ಉಂಟಾಗಿರುವ ಗೊಂದಲಗಳ ಬಗ್ಗೆ ಸ್ಪಷ್ಟೀಕರಣ ಕೋರಿದ್ದು ಸದರಿ ಸಂಬಂಧ ಸರ್ಕಾರದ ಆದೇಶ ಸಂಖ್ಯೆ: ಎನರ್ಜಿ/164/ಪಿಎಸ್ಆರ್/2023, ದಿನಾಂಕ: 15.06.2023 ಹೊರಡಿಸಲಾಗಿದೆ.

ಭಾಗ್ಯಜ್ಯೋತಿ ಮತ್ತು ಕುಟೀರಜ್ಯೋತಿ ಯೋಜನೆಯಡಿ ಈಗಾಗಲೇ 40 ಯೂನಿಟ್‌ಗಳ ಉಚಿತ ವಿದ್ಯುತ್ ನ್ನು ನೀಡಲಾಗುತ್ತಿದ್ದು, ಈ ಗ್ರಾಹಕರಿಗೆ ಗೃಹಜ್ಯೋತಿ ಯೋಜನೆಯಡಿ ಪ್ರತಿ ತಿಂಗಳಿಗೆ ರಾಜ್ಯದ ಸರಾಸರಿಯಾದ 53 ಯೂನಿಟ್‌ಗಳು + ಹೆಚ್ಚುವರಿಯಾಗಿ 10% ರಷ್ಟು ಉಚಿತವಾಗಿ ನೀಡುವ ಬಗ್ಗೆ ಹಾಗೂ ಅಮೃತಜ್ಯೋತಿ ಯೋಜನೆಯಡಿ 75 ಯೂನಿಟ್ ವಿದ್ಯುತ್‌ನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕುಟುಂಬಗಳಿಗೆ DBT ಯಡಿ

ಖಾತೆಗೆ ವರ್ಗಾವಣೆ ಮೂಲಕ ಈಗಾಗಲೇ ಉಚಿತವಾಗಿ ನೀಡುತ್ತಿದ್ದು, ಈ ಗ್ರಾಹಕರಿಗೆ/ಫಲಾನುಭವಿಗಳಿಗೆ ಗೃಹಜ್ಯೋತಿ ಯೋಜನೆಯಲ್ಲಿ ಮಾಸಿಕ 75 ಯೂನಿಟ್ + ಹೆಚ್ಚುವರಿಯಾಗಿ 10% ರಷ್ಟು ಉಚಿತವಾಗಿ ನೀಡುವ ಬಗ್ಗೆ ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಎನರ್ಜಿ/208/ಪಿಎಸ್‌ಆರ್/2023**

**ದಿನಾಂಕ: 17.07.2023, ಬೆಂಗಳೂರು**

ಭಾಗ್ಯಜ್ಯೋತಿ ಮತ್ತು ಕುಟೀರಜ್ಯೋತಿ ಯೋಜನೆಯಡಿ ಈಗಾಗಲೇ 40 ಯೂನಿಟ್‌ಗಳ ಉಚಿತ ವಿದ್ಯುತ್‌ನ್ನು ನೀಡಲಾಗುತ್ತಿದ್ದು, ಈ ಗ್ರಾಹಕರಿಗೆ ಗೃಹಜ್ಯೋತಿ ಯೋಜನೆಯಡಿ ಪ್ರತಿ ತಿಂಗಳಿಗೆ ರಾಜ್ಯದ ಸರಾಸರಿಯಾದ 53 ಯೂನಿಟ್‌ಗಳವರೆಗೆ + ಹೆಚ್ಚುವರಿಯಾಗಿ 10% ರಷ್ಟು ಉಚಿತವಾಗಿ ನೀಡುವುದು.

ಅಮೃತಜ್ಯೋತಿ ಯೋಜನೆಯಡಿ 75 ಯೂನಿಟ್ ವಿದ್ಯುತ್‌ನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಕುಟುಂಬಗಳಿಗೆ DBT ಅಡಿ ಖಾತೆಗೆ ವರ್ಗಾವಣೆ ಮೂಲಕ ಈಗಾಗಲೇ ಉಚಿತವಾಗಿ ನೀಡುತ್ತಿದ್ದು, ಈ ಗ್ರಾಹಕರಿಗೆ/ಫಲಾನುಭವಿಗಳಿಗೆ ಗೃಹಜ್ಯೋತಿ ಯೋಜನೆಯಲ್ಲಿ ಮಾಸಿಕ 75 ಯೂನಿಟ್‌ಗಳವರೆಗೆ + ಹೆಚ್ಚುವರಿಯಾಗಿ 10% ರಷ್ಟು ಉಚಿತವಾಗಿ ನೀಡುವುದು.

ಗೃಹಜ್ಯೋತಿ ಯೋಜನೆಗೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರದಿಂದ ಹೊರಡಿಸಿರುವ ಎಲ್ಲಾ ಆದೇಶಗಳು ಯಥಾವತ್ತಾಗಿ ಮುಂದುವರೆಯುತ್ತದೆ.

ಈ ಆದೇಶವನ್ನು ಸಚಿವ ಸಂಪುಟ ಸಭೆಯ ಪ್ರಕರಣ ಸಂಖ್ಯೆ: ಸಿ.388/2023 ದಿನಾಂಕ 13.07.2023 ರಲ್ಲಿ ನೀಡಿರುವ ಅನುಮೋದನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿಗಳು:**

1. ಮಹಾಲೇಖಪಾಲರು (ಎ&ಇ) / (ಲೆಕ್ಕಪರಿಶೋಧನೆ-1 & ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು-1.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ / ಕವಿನಿನಿ / ಬೆವಿಕಂ / ಮವಿಕಂ / ಹುವಿಕಂ / ಗುವಿಕಂ / ಚಾವಿಸನಿನಿ / ಹುಕ್ಕೇರಿ.
8. ಸರ್ಕಾರದ ಜಂಟಿ ಕಾರ್ಯದರ್ಶಿ (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
9. ಮಾನ್ಯ ಉಪಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
10. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, #16, ಸಿ–1, ಮಿಲ್ಲರ್ಸ್ ಬಿಡ್ ಏರಿಯಾ, ವಸಂತನಗರ, ಬೆಂಗಳೂರು–52.
12. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, (ವೆಚ್ಚ–1), ವಿಧಾನ ಸೌಧ, ಬೆಂಗಳೂರು.
13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
14. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
15. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
16. ಶಾಖೆಯ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.